**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೊಪ್ಪಳ**

**ಸಿ.ಸಿ.ನಂ.1007/2018**

ಪಿಡಬ್ಲ್ಯೂ: 3 ಸಿಡಬ್ಲ್ಯೂ: 3

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು. ದಿನಾಂಕ: 19/02/2021

| | |
|---|---|
| ಸಾಕ್ಷಿದಾರರ ಹೆಸರು | ಮಾರುತಿ ಕೊರಿಯಾರ್ |
| ತಂದೆಯ/ಗಂಡನ ಹೆಸರು | ಮೈಲಪ್ಪ ಕೊರಿಯಾರ್ |
| ವಯಸ್ಸು | 32 ವರ್ಷ |
| ಉದ್ಯೋಗ | ಹೋಟೆಲ್ ಕೆಲಸ |
| ವಾಸಸ್ಥಳ | ಕೊಪ್ಪಳ |

**ಮುಖ್ಯ ವಿಚಾರಣೆ : ಸಹಾಯಕ ಸರಕಾರಿ ಅಭಿಯೋಜಕರಿಂದ:**

ಈ ಕೇಸಿನ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ. ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿರುವ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಪಂಚನಾಮೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಪೋಲಿಸರು ಘಟನಾ ಸ್ಥಳದಲ್ಲಿ ನನ್ನನ್ನು ನಿಲ್ಲಿಸಿಕೊಂಡು ಒಂದು ಫೋಟೋವನ್ನು ತೆಗೆಸಿಕೊಂಡಿರುತ್ತಾರೆ. ಸಾಕ್ಷಿ ಮುಂದುವರೆದು ಆದರೆ ಘಟನಾ ಸ್ಥಳದಲ್ಲಿ ಏನೂ ಇರಲಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಗೆ ತೋರಿಸಿದ್ದು ಸಾಕ್ಷಿಯು ಅದನ್ನು ಗುರುತಿಸಿದ್ದು, ಈಗಾಗಲೇ ಅದನ್ನು ನಿಪಿ–5 ಎಂದು ಗುರುತಿಸಲಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿದಾರ ಅಭಿಯೋಜನೆಯ ಕೇಸಿಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದಾರೆ ಅಂತಾ ಸಹಾಯಕ ಸರಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿದ್ದರಿಂದ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲಾಯಿತು ಮತ್ತು ಸರಕಾರಿ ಸಹಾಯಕ ಅಭಿಯೋಜಕರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಅನುಮತಿಸಲಾಯಿತು).

**ಪಾಟೀ ಸವಾಲು : ಸಹಾಯಕ ಸರಕಾರಿ ಅಭಿಯೋಜಕರಿಂದ:**

ದಿನಾಂಕ: 17–2–2018 ರಂದು ಘಟನಾ ಸ್ಥಳವಾದ ಕೊಪ್ಪಳ–ಕುಷ್ಟಗಿ ರಸ್ತೆಯ ಹಟ್ಟಿ ಕ್ರಾಸ್ ದಾಟಿ ಸುಮಾರು ಅರ್ಧ ಕಿಮೀ ಉತ್ತರಕ್ಕೆ ಇರಕಲ್ಲಗಡ ಕಡೆಗೆ ಪೋಲಿಸರು ನನ್ನನ್ನು ಕರೆದುಕೊಂಡು ಹೋಗಿ ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುವರು ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾನು ಹಟ್ಟಿ ಕ್ರಾಸ್ ಬಳಿ ಕೊಪ್ಪಳಕ್ಕೆ ಬರುವಂತಹ ಸಂದರ್ಭದಲ್ಲಿ ಪೋಲಿಸರು ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಘಟನಾ ದಿನಾಂಕದಂದು ಪಂಚನಾಮೆ ಜರುಗಿಸಿದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ಘಟನಾ ದಿನದಂದು ಬುಲೆರೋ ಪಿಕಪ್ ವಾಹನ ಮತ್ತು ಅಪೆ ಆಟೋ ಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಪಂಚನಾಮೆ ಮಾಡುವ ಕಾಲಕ್ಕೆ ಆರೋಪಿತನು ಅತೀ ವೇಗ ಮತ್ತು ಅಲಕ್ಷ್ಯತನದಿಂದ ವಾಹನ ಚಲಾಯಿಸುತ್ತಾ ತನ್ನ ಮುಂದೆ ಹೊರಟಿದ್ದ ವಾಹನಕ್ಕೆ ಟಕ್ಕರ ಕೊಟ್ಟು

ಅಪಘಾತ ಮಾಡಿದ್ದರಿಂದ ಅಪೆ ವಾಹನದಲ್ಲಿದ್ದ ಪಾಲಿಕೆಮ್ಮ ಎಂಬುವವರು ಮೃತಪಟ್ಟಿರುತ್ತಾರೆ. ಉಳಿದ 14 ಜನರಿಗೆ ಸಾದಾ ಮತ್ತು ಭಾರೀ ಗಾಯಗಳಾಗಿರುತ್ತವೆ ಎನ್ನುವ ವಿಚಾರವನ್ನು ನನಗೆ ಪೋಲಿಸರು ತಿಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಘಟನೆಯ ದಿನದಂದು ಸಾಯಂಕಾಲ 4 ರಿಂದ 5 ಗಂಟೆ ವರೆಗೆ ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಘಟನಾ ಸ್ಥಳದಲ್ಲೆ ನಿಪಿ-5 ಫೋಟೋವನ್ನು ತೆಗೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು : ಶ್ರೀ ಎಂ.ಎಂ.ಸಿ.ಆರೋಪಿ ಪರ ವಕೀಲರಿಂದ :

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ: ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಕೊಪ್ಪಳ.**

**<u>ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೊಪ್ಪಳ</u>**

**ಸಿ.ಸಿ.ನಂ.1007/2018**

ಪಿಡಬ್ಲೂ: 2 ಸಿಡಬ್ಲೂ: 2

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು. ದಿನಾಂಕಃ 19/02/2021

| | |
|---|---|
| ಸಾಕ್ಷಿದಾರರ ಹೆಸರು | ದೇವಪ್ಪ ಹಿರೇಮನಿ |
| ತಂದೆಯ/ಗಂಡನ ಹೆಸರು | ನೀಲಪ್ಪ ಹಿರೇಮನಿ |
| ವಯಸ್ಸು | 42 ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಹಟ್ಟಿ , ತಾಃ ಕೊಪ್ಪಳ |

**<u>ಮುಖ್ಯ ವಿಚಾರಣೆ ಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಈ ಕೇಸಿನ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ. ಅಪಘಾತವಾದ ಬಗ್ಗೆ ಪೋಲಿಸರು ನನಗೆ ಮಾಹಿತಿಯನ್ನು ನೀಡಿರುತ್ತಾರೆ. ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿರುವ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಪೋಲಿಸರು ಘಟನಾ ಸ್ಥಳದಲ್ಲಿ ನನ್ನನ್ನು ನಿಲ್ಲಿಸಿಕೊಂಡು ಒಂದು ಫೋಟೋವನ್ನು ತೆಗೆಸಿಕೊಂಡಿರುತ್ತಾರೆ. ಸದರಿ ಫೋಟೋವನ್ನು ಹಟ್ಟಿ ಕ್ರಾಸ್ ಬಳಿ ಇರುವ ರಸ್ತೆಯಲ್ಲಿ ತೆಗೆದಿರುತ್ತಾರೆ, ನಾನು ಏಕೆ ಎಂದು ಪ್ರಶ್ನೆ ಮಾಡಲಾಗಿ ಪೋಲಿಸರು ಸುಮ್ಮನೆ ಬೇಕಾಗಿರುತ್ತದೆ ಎಂದು ನನಗೆ ತಿಳಿಸಿರುತ್ತಾರೆ. ಅದನ್ನು ಸಾಕ್ಷಿಗೆ ತೋರಿಸಿದ್ದು ಸಾಕ್ಷಿಯು ಅದನ್ನು ಗುರುತಿಸಿದ್ದು, ಅದನ್ನು ನಿಪಿ–5 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿದಾರ ಅಭಿಯೋಜನೆಯ ಕೇಸಿಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದಾರೆ ಅಂತಾ ಸಹಾಯಕ ಸರಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿದ್ದರಿಂದ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲಾಯಿತು ಮತ್ತು ಸರಕಾರಿ ಸಹಾಯಕ ಅಭಿಯೋಜಕರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಅನುಮತಿಸಲಾಯಿತು).

**<u>ಪಾಟೀ ಸವಾಲು ಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕಃ 17–2–2018 ರಂದು ಘಟನಾ ಸ್ಥಳವಾದ ಕೊಪ್ಪಳ–ಕುಷ್ಟಗಿ ರಸ್ತೆಯ ಹಟ್ಟಿ ಕ್ರಾಸ್ ದಾಟಿ ಸುಮಾರು ಅರ್ಧ ಕಿಮೀ ಉತ್ತರಕ್ಕೆ ಇರಕಲ್ಲಗಡ ಕಡೆಗೆ ಪೋಲಿಸರು ನನ್ನನ್ನು ಕರೆದುಕೊಂಡು ಹೋಗಿ ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುವರು ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾನು ಹಟ್ಟಿ ಕ್ರಾಸ್ ಬಳಿ ಕೊಪ್ಪಳಕ್ಕೆ ಬರುವಂತಹ ಸಂದರ್ಭದಲ್ಲಿ ಪೋಲಿಸರು ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಘಟನಾ ದಿನಾಂಕದಂದು ಪಂಚನಾಮೆ ಜರುಗಿಸಿದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ಘಟನಾ ದಿನದಂದು ಬುಲೆರೋ ಪಿಕಪ್ ವಾಹನ ಮತ್ತು ಅಪೆ ಆಟೋ ಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಪಂಚನಾಮೆ ಮಾಡುವ ಕಾಲಕ್ಕೆ ಆರೋಪಿತನು

ಅತೀ ವೇಗ ಮತ್ತು ಅಲಕ್ಷ್ಯತನದಿಂದ ವಾಹನ ಚಲಾಯಿಸುತ್ತಾ ತನ್ನ ಮುಂದೆ ಹೊರಟಿದ್ದ ವಾಹನಕ್ಕೆ ಟಕ್ಕರ ಕೊಟ್ಟು ಅಪಘಾತ ಮಾಡಿದ್ದರಿಂದ ಅಪೆ ವಾಹನದಲ್ಲಿದ್ದ ಪಾಲಿಕೆಮ್ಮ ಎಂಬುವವರು ಮೃತಪಟ್ಟಿರುತ್ತಾರೆ. ಉಳಿದ 14 ಜನರಿಗೆ ಸಾದಾ ಮತ್ತು ಭಾರೀ ಗಾಯಗಳಾಗಿರುತ್ತವೆ ಎನ್ನುವ ವಿಚಾರವನ್ನು ನನಗೆ ಪೋಲಿಸರು ತಿಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಘಟನೆಯ ದಿನದಂದು ಸಾಯಂಕಾಲ 4 ರಿಂದ 5 ಗಂಟೆ ವರೆಗೆ ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಘಟನಾ ಸ್ಥಳದಲ್ಲೆ ನಿಪಿ-5 ಫೋಟೋವನ್ನು ತೆಗೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು : ಶ್ರೀ ಎಂ.ಎಂ.ಸಿ. ಆರೋಪಿ ಪರ ವಕೀಲರಿಂದ :

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ: ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಕೊಪ್ಪಳ.**